## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1216
ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 17.12.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಲಬುರಗಿ ನಗರದಲ್ಲಿರುವ ಪ್ರಸ್ತುತ ಬಸ್ ನಿಲ್ದಾಣದ ಬಳಿ ತುಂಬಾ ಸಂಚಾರ ದಟ್ಟಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿದೆ.<br><br>**ಕಲಬುರಗಿ ಕೇಂದ್ರ ಬಸ್ ನಿಲ್ದಾಣದ ಬಳಿ ಸಂಚಾರ ದಟ್ಟಣೆ ಕಡಿಮೆ ಮಾಡಲು ಈ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ:-** |
| ಆ. | ಬಂದಿದ್ದಲ್ಲಿ ನಗರದ ಹೊರ-ಭಾಗಕ್ಕೆ ಕೇಂದ್ರ ಬಸ್ ನಿಲ್ದಾಣವನ್ನು ಸ್ಥಳಾಂತರಿಸಲು ಸರ್ಕಾರ ಚಿಂತಿಸಿದೆಯೇ; ಈ ವಿಷಯದ ಕುರಿತು ಈವರೆಗೆ ಸಾಧಿಸಿರುವ ಪ್ರಗತಿ ಏನು: | • ಕಲಬುರಗಿ ಕೇಂದ್ರ ಬಸ್ ನಿಲ್ದಾಣದ ಮುಂಭಾಗದಲ್ಲಿ ಸಂಚಾರ ದಟ್ಟಣೆ ಕಡಿಮೆ ಮಾಡಲು ಕೇಂದ್ರ ಬಸ್ ನಿಲ್ದಾಣದಿಂದ ಜೇವರ್ಗಿ, ಯಾದಗಿರಿ, ಸೇಡಂ, ಚಿತ್ತಾಪುರ ಮತ್ತು ಚಿಂಚೋಳಿ ಮಾರ್ಗವಾಗಿ ಕಾರ್ಯಾಚರಣೆಯಾಗುವ ಸಾರಿಗೆಗಳನ್ನು ಕೇಂದ್ರ ಬಸ್ ನಿಲ್ದಾಣ-ಹೀರಾಪೂರ ಕ್ರಾಸ್-ಬಿದ್ದಾಪೂರ ಕಾಲೋನಿ-ಹೈಕೋರ್ಟ-ರಾಮಮಂದಿರ ಮಾರ್ಗವಾಗಿ ಹಾಗೂ ಕಲಬುರಗಿ ನಗರಕ್ಕೆ ಆಗಮಿಸುವ ಸಾರಿಗೆಗಳನ್ನು ರಾಮಮಂದಿರ-ಜೇವರ್ಗಿ ಕ್ರಾಸ್ (ರಾಷ್ಟ್ರಪತಿ ಸರ್ಕಲ್) ಮುಖಾಂತರ ಕೇಂದ್ರ ಬಸ್ ನಿಲ್ದಾಣಕ್ಕೆ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>• ಕೇಂದ್ರ ಬಸ್ ನಿಲ್ದಾಣದ ದಕ್ಷಿಣಕ್ಕೆ ಕಾಂಪೌಂಡ್ ಒಡೆದು ಮತ್ತೊಂದು ನಿರ್ಗಮನ ದ್ವಾರವನ್ನು ನಿರ್ಮಿಸಿ ಸದರಿ ದ್ವಾರದಿಂದ ನೇರವಾಗಿ ಕಣ್ಣಿ ಮಾರ್ಕೆಟ್ ರಸ್ತೆಗೆ ಬಸ್ ಕಾರ್ಯಾಚರಣೆ ಮಾಡಲು ಈಗಾಗಲೇ ರಸ್ತೆ ದುರಸ್ಥಿಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಕಲಬುರಗಿ ನಗರದ ಹೊರಭಾಗಕ್ಕೆ ಕೇಂದ್ರ ಬಸ್ ನಿಲ್ದಾಣವನ್ನು ಸ್ಥಳಾಂತರಿಸುವ ಕುರಿತು ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ. |
| ಇ. | ಕಲ್ಯಾಣ ಕರ್ನಾಟಕದಲ್ಲಿ ನೂತನವಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ ಹೊಸ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತಗೆದುಕೊಂಡ ಕ್ರಮಗಳೇನು; | ಕಲ್ಯಾಣ ಕರ್ನಾಟಕದಲ್ಲಿ ನೂತನವಾಗಿ ರಚನೆಯಾಗಿರುವ 25 ತಾಲ್ಲೂಕು ಕೇಂದ್ರಗಳಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಾಣ ಮಾಡಲು ನಿಗಮದ ಆರ್ಥಿಕ ಸಾಮರ್ಥ್ಯಕ್ಕನುಗುಣವಾಗಿ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲು ಪರಿಶೀಲಿಸಲಾಗುತ್ತಿದೆ. |
| ಈ. | ಕಲಬುರಗಿ ಜಿಲ್ಲೆಯ ಯಡ್ರಾಮಿ ತಾಲ್ಲೂಕಿನ ಯಡ್ರಾಮಿ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಯಡ್ರಾಮಿ ಗ್ರಾಮದ ಸರ್ವೆ ನಂ:237ರಲ್ಲಿನ 4.00 ಎಕರೆ "ಗೋಮಾಳ" ಜಮೀನನ್ನು ಬಸ್ ಘಟಕ ನಿರ್ಮಾಣಕ್ಕಾಗಿ ಗುರುತಿಸಿ, ಸದರಿ ಜಮೀನನ್ನು ಮಂಜೂರು ಮಾಡುವಂತೆ ಕಂದಾಯ ಇಲಾಖೆಯನ್ನು ಪತ್ರ ದಿನಾಂಕ:08.12.2025ರಲ್ಲಿ ಕೋರಲಾಗಿದ್ದು, ಜಮೀನು ಹಸ್ತಾಂತರಿಸಿದ ನಂತರ ಅನುದಾನದ ಲಭ್ಯತೆಗನುಸಾರ ಆದ್ಯತೆಯ ಮೇರೆಗೆ ಬಸ್ ಘಟಕ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು. |

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| ಉ. | ರಾಜ್ಯದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಒ) ಯಿಂದ ವಾಹನಗಳಿಗೆ ಪರವಾನಿಗೆ ಪಡೆದು ಒಂದೇ ಅನುಮತಿ (Permit) ಪತ್ರದ ಆಧಾರದ ಮೇಲೆ ಹಲವಾರು ವಾಹನಗಳನ್ನು ಓಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ರಾಜ್ಯದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಒ) ಯಿಂದ ವಾಹನಗಳಿಗೆ ಒಂದೇ ಅನುಮತಿ (Permit) ಪತ್ರದ ಆಧಾರದ ಮೇಲೆ ಹಲವಾರು ವಾಹನಗಳನ್ನು ಓಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br>ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66ರನ್ವಯ ನೋಂದಣಿಯಾಗುವ ಸಾರಿಗೆ ವಾಹನಗಳ ವರ್ಗವಾರು ಪ್ರತ್ಯೇಕವಾಗಿ ರಹದಾರಿಯನ್ನು ಕಡ್ಡಾಯವಾಗಿ ಪಡೆದು ಸಂಚರಿಸಬೇಕಾಗಿರುತ್ತದೆ. ಅದರಂತೆ, ರಾಜ್ಯದಲ್ಲಿಯೂ ಸಹ ಕ್ರಮ ವಹಿಸಲಾಗುತ್ತಿರುತ್ತದೆ. ಸಾರಿಗೆ ಇಲಾಖೆಯಲ್ಲಿ ಕೈಗೊಳ್ಳುತ್ತಿರುವ ಪ್ರವರ್ತನ ಚಟುವಟಿಕೆಗಳಲ್ಲಿ ರಹದಾರಿ ಪಡೆಯದೇ ಅನಧಿಕೃತವಾಗಿ ಸಂಚರಿಸುತ್ತಿರುವುದು ಕಂಡುಬಂದಲ್ಲಿ ಅಂತಹ ವಾಹನಗಳ ವಿರುದ್ಧ ಮೋಟಾರು ವಾಹನಗಳ ಕಾಯ್ದೆ, 1988 ಮತ್ತು ಅದರಡಿ ರಚಿತವಾದ ನಿಯಮಗಳನ್ವಯ ಕ್ರಮ ವಹಿಸಲಾಗುತ್ತಿರುತ್ತದೆ. |

ಸಂಖ್ಯೆ: ಟಿಡಿ 255 ಟಿಸಿಕ್ಯೂ 2025

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು